ರಾಜ್ಯದಲ್ಲಿ ಶಾಲಾ ಮಕ್ಕಳ ಬಿಸಿ ಊಟದ ಕಾರ್ಯಕ್ರಮದ ಕುರಿತು

4081 (4714) : ಶ್ರೀ ಗುರುಸ್ವಾಮಿ ಸಿ (ಚಾಮರಾಜನಗರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಶಾಲಾ ಮಕ್ಕಳಿಗೆ ಬಿಸಿ ಊಟದ ಕಾರ್ಯಕ್ರಮ ಸಾಕಷ್ಟು ಗೊಂದಲಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಈ ಕಾರ್ಯಕ್ರಮ ಜಾರಿಗೊಳಿಸುವ ಜವಾಬ್ದಾರಿ ಯಾರಿಗೆ ವಹಿಸಲಾಗಿದೆ ಶಾಸಕರ ಪಾತ್ರವೇನು? (ವಿವರ ಒದಗಿಸುವುದು)

ಇ) ಈ ಯೋಜನೆಗೆ ವರ್ಷಕ್ಕೆ ಬೇಕಾಗಿರುವ ಹಣವೆಷ್ಟು, ಈಗ ಬಿಡುಗಡೆಯಾಗಿರುವುದು ಎಷ್ಟು? (ವಿವರ ನೀಡುವುದು)

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಬಂದಿದೆ.

ಆ) ಅಕ್ಷರ ದಾಸೋಹ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿಗಳಿಗೆ ವಹಿಸಿದೆ. ಜಿಲ್ಲಾಮಟ್ಟದ ಅನುಷ್ಠಾನ ಸಮಿತಿಯನ್ನು ಜಿಲ್ಲಾ ಉಸ್ತುವಾರಿ ಮಂತ್ರಿಗಳ ನೇತೃತ್ವದಲ್ಲಿ ರಚಿಸಲಾಗಿ ಜಿಲ್ಲೆಯ ಎಲ್ಲಾ ವಿಧಾನ ಸಭಾ ಹಾಗೂ ವಿಧಾನ ಪರಿಷತ್ ಸದಸ್ಯರುಗಳಿಗೆ ಈ ಸಮಿತಿಯ ಸದಸ್ಯರುಗಳನ್ನಾಗಿ ನೇಮಿಸಿದೆ. ಜಿಲ್ಲಾ ಅನುಷ್ಠಾನದ ಸಮಿತಿಗಳಿಗೆ ಈ ಕೆಳಕಂಡ ಉಲ್ಲೇಖಾಂಶಗಳನ್ನು ನೀಡಲಾಗಿದೆ.

ಅ. ಜಿಲ್ಲೆಯಲ್ಲಿ ಅಕ್ಷರ ದಾಸೋಹ ಕಾರ್ಯಕ್ರಮ ಅನುಷ್ಠಾನದ ಬಗ್ಗೆ ಉಸ್ತುವಾರಿ ನಡೆಸುವುದು.

ಆ. ಕಾರ್ಯಕ್ರಮದ ನಿರ್ವಹಣೆಗಾಗಿ ನಿಯುಕ್ತವಾದ ವಿವಿಧ ಸರ್ಕಾರಿ ಇಲಾಖೆಗಳೊಡನೆ ಸಮನ್ವಯ ನಿರ್ವಹಿಸುವುದು.

ಇ. ಅಡುಗೆ ಕೇಂದ್ರಗಳಿಗೆ ಸಿಬ್ಬಂದಿ ನಿಯುಕ್ತಿ ಬಗ್ಗೆ ಪರಿಶೀಲಿಸುವುದು.

ಈ. ಆರೋಗ್ಯ ಮತ್ತು ಸ್ವಚ್ಛತೆ ವ್ಯವಸ್ಥೆಯ ಬಗ್ಗೆ ನಿಗಾ ಇಡುವುದು.

ಉ. ಕಾರ್ಯಕ್ರಮ ಅನುಷ್ಠಾನದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು / ಪ್ರಾಥಮಿಕ ಆರೋಗ್ಯ ಘಟಕಗಳ ಸಿಬ್ಬಂದಿಯನ್ನು ತೊಡಗಿಸುವುದು.

ಇ) ರೂ. 202.00 ಕೋಟಿಗಳು ಬೇಕಾಗಿದ್ದು ಈವರೆಗೆ

ರೂ. 75.00 ಕೋಟಿಗಳನ್ನು ಬಿಡುಗಡೆ ಮಾಡಿದೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಜಿಲ್ಲಾ ತಾಲ್ಲೂಕು ಹಾಗೂ ಗ್ರಾಮ ಪಂಚಾಯತ್‌ಗಳಿಗೆ ಬಿಡುಗಡೆಯಾದ ಅನುದಾನ

4083 (4716) : ಶ್ರೀ ಗುರುಸ್ವಾಮಿ ಸಿ. (ಚಾಮರಾಜನಗರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 2002-03ನೇ ವರ್ಷದಲ್ಲಿ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್‌ಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ನಿಗದಿಯಾದ ಹಣವೆಷ್ಟು; ಬಿಡುಗಡೆಯಾದ ಹಣವೆಷ್ಟು; ಕಡಿತಗೊಂಡಿರುವ ಹಣವೆಷ್ಟು; (ಶೇಕಡವಾರು ವಿವರ ನೀಡುವುದು)